859 ಶ್ರೀ ರಾಮಚಂದ್ರ ಎಸ್.ವಿ.(ಜಗಳೂರು ಕ್ಷೇತ್ರ) : ಮಾನ್ಯ ಸಣ್ಣ ನೀರಾವರಿ, ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ॥ ನಂಜುಂಡಪ್ಪ ವರದಿಯ ಪ್ರಕಾರ ರಾಜ್ಯದಲ್ಲಿ ಹಿಂದುಳಿದ ತಾಲ್ಲೂಕುಗಳೆಷ್ಟು; ಇವುಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಯೋಜನೆಗಳೇನು; ಇದಕ್ಕೆ ಮಂಜೂರಾಗಿರುವ ಹಣ ಎಷ್ಟು;

ಆ) ಅತಿ ಹಿಂದುಳಿದ ತಾಲ್ಲೂಕಿನ ಪಟ್ಟಿಯಲ್ಲಿರುವ ಜಗಳೂರು ತಾಲ್ಲೂಕಿನ ಅಭಿವೃದ್ಧಿಗೆ ವಿಶೇಷವಾಗಿ ಮಂಜೂರು ಮಾಡಿರುವ ಕಾರ್ಯಕ್ರಮಗಳೇನು; ಇದಕ್ಕೆ ಬಿಡುಗಡೆ ಮಾಡಿರುವ ಹಣವೆಷ್ಟು; ಇಲ್ಲವಾದಲ್ಲಿ ಕಾರಣಗಳೇನು?

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) :

ಅ) ಡಾ॥ ನಂಜುಂಡಪ್ಪ ವರದಿಯ ಪ್ರಕಾರ ರಾಜ್ಯದಲ್ಲಿ ಹಿಂದುಳಿದ ತಾಲ್ಲೂಕುಗಳು 114; ಇವುಗಳ ಅಭಿವೃದ್ಧಿಗೆ ಕೃಷಿ, ಜಲಾನಯನ ಅಭಿವೃದ್ಧಿ, ಪಶುಸಂಗೋಪನೆ, ಅರಣ್ಯ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್, ಬೃಹತ್ ಮತ್ತು ಸಣ್ಣ ನೀರಾವರಿ, ವಸತಿ, ಇಂಧನ, ವಾಣಿಜ್ಯ ಮತ್ತು ಕೈಗಾರಿಕೆ, ಸಾರಿಗೆ, ಕಾರ್ಮಿಕ, ಆರೋಗ್ಯ, ಶಿಕ್ಷಣ, ಸಮಾಜ ಕಲ್ಯಾಣ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಲಯಗಳಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಇದಕ್ಕೆ ಮಂಜೂರಾಗಿರುವ ಹಣ ಈ ಕೆಳಕಂಡಂತಿದೆ.

(ಕೋಟಿ ರೂ.ಗಳಲ್ಲಿ)

ವರ್ಷ	ಆಯವ್ಯಯದಲ್ಲಿ ಮಂಜೂರಾಗಿರುವ ಹಣ
2007–08	1571.50
2008–09	2547.33
2009–10	2578.83
ಒಟ್ಟು	**6697.66**

ಆ) ಜಗಳೂರು ತಾಲ್ಲೂಕಿನ ಅಭಿವೃದ್ಧಿಗಾಗಿ ಕೃಷಿ, ಜಲಾನಯನ ಅಭಿವೃದ್ಧಿ, ಪಶುಸಂಗೋಪನೆ, ಅರಣ್ಯ, ಗ್ರಾಮೀಣ, ಅಭಿವೃದ್ಧಿ ಮತ್ತು ಪಂಚಾಯತ್ ರಾಜ್, ಸಣ್ಣ ನೀರಾವರಿ, ವಸತಿ, ಇಂಧನ, ವಾಣಿಜ್ಯ ಮತ್ತು ಕೈಗಾರಿಕೆ, ಕಾರ್ಮಿಕ, ಶಿಕ್ಷಣ, ಸಮಾಜ ಕಲ್ಯಾಣ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಲಯಗಳಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಇದಕ್ಕಾಗಿ ಜಗಳೂರು ತಾಲ್ಲೂಕಿಗೆ 2007–08 ರಲ್ಲಿ 493 ಲಕ್ಷ ರೂ.ಗಳನ್ನು ಹಾಗೂ 2008–09 ರಲ್ಲಿ 1029 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ.

846 ಶ್ರೀ ರುದ್ರೇಶಗೌಡ ವೈ.ಎನ್.(ಬೇಲೂರು) : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2009–10ನೇ ಸಾಲಿನಲ್ಲಿ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗೆ ನೀಡಿರುವ ಅನುದಾನ ಎಷ್ಟು?

ಆ) ಈ ಅನುದಾನದಲ್ಲಿ 2009–10ನೇ ಸಾಲಿನಲ್ಲಿ ಹೊಸ ಕಾಮಗಾರಿಗಳನ್ನು ತೆಗೆದುಕೊಳ್ಳಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಇ) ಹೊಸ ಕಾಮಗಾರಿಗಳನ್ನು ತೆಗೆದುಕೊಳ್ಳಬಹುದಾಗಿದ್ದಲ್ಲಿ, ಇದುವರೆವಿಗೂ ಕ್ರಿಯಾ ಯೋಜನೆಯನ್ನು ತಯಾರಿಸದಿರುವ ಕಾರಣಗಳೇನು?

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) :

ಅ) 2009–10ನೇ ಸಾಲಿಗೆ ಸರ್ಕಾರವು ಮಂಡಳಿಗೆ ಒಟ್ಟು ರೂ.1600.00 ಲಕ್ಷ ನಿಗದಿಪಡಿಸಿದೆ.

ಆ) ಸಹಾಯನುದಾನದಡಿಯಲ್ಲಿ ನಿಗದಿಪಡಿಸಿರುವ ಅನುದಾನದಲ್ಲಿ ಶೇಕಡ 50 ರಷ್ಟನ್ನು ಹೊಸ ಕಾಮಗಾರಿಗಳನ್ನು ಬಳಸಿಕೊಳ್ಳಲು ಮಂಡಳಿಗಳಿಗೆ ಸೂಚನೆಯನ್ನು ನೀಡಲಾಗಿದೆ.

ಇ) 2009–10ನೇ ಸಾಲಿನಲ್ಲಿ ಹೊಸ ಕಾಮಗಾರಿಗಳಿಗೆ ರೂ. 450.22 ಲಕ್ಷಗಳನ್ನು ಮೀಸಲಿರಿಸಿ, ಮಂಡಳಿಯ ಕ್ರಿಯಾ ಯೋಜನೆಯನ್ನು ತಯಾರಿಸಿದೆ.